**All India Radio: Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**23.04.2025 / 2.30 p.m.**

ಮುಖ್ಯಾಂಶಗಳು

೧. ಪಹಲ್ಗಾಮ್ ಭಯೋತ್ಪಾದಕರ ದಾಳಿಯಲ್ಲಿ ಕರ್ನಾಟಕದ ಇಬ್ಬರು ಪ್ರವಾಸಿಗರ ಸಾವು; ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೨. ಕಾಶ್ಮೀರದಲ್ಲಿರುವ ರಾಜ್ಯದ ಪ್ರವಾಸಿಗರು ಸುರಕ್ಷಿತ - ಧೈರ್ಯ ತುಂಬಿದ ಸಚಿವ ಸಂತೋಷ್ ಲಾಡ್

೩. ಆನೆಗೊಂದಿಯ ಕೃಷ್ಣದೇವರಾಯ ಸಮಾಧಿ ಸ್ಥಳಕ್ಕೆ ಸಚಿವ ಎಚ್.ಕೆ.ಪಾಟೀಲ್ ಭೇಟಿ, ಪರಿಶೀಲನೆ

೪. ರಾಜ್ಯದಲ್ಲಿ ಆನ್‌ಲೈನ್ ಹಣಕಾಸು ವಂಚನೆ ತಡೆಗೆ ಸಹಾಯವಾಣಿ ಜೊತೆಗೆ ವೆಬ್ ಪಾಟ್ ಉನ್ನತೀಕರಣ

*****************

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕರ ದಾಳಿಯಲ್ಲಿ ಈವರೆಗಿನ ಮಾಹಿತಿಯಂತೆ ಕರ್ನಾಟಕದ ಇಬ್ಬರು ಪ್ರವಾಸಿಗರು ಮೃತಪಟ್ಟಿದ್ದಾರೆ. ಭಯೋತ್ಪಾದನಾ ದಾಳಿಯಲ್ಲಿ ಶಿವಮೊಗ್ಗದ ಮಂಜುನಾಥ್ ಹಾಗೂ ಬೆಂಗಳೂರಿನ ಭರತ್ ಭೂಷಣ್ ಮೃತಪಟ್ಟಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಮಂಜುನಾಥ್ ರಾವ್ ಅವರ ಪತ್ನಿ ಪಲ್ಲವಿ ಹಾಗೂ ಬೆಂಗಳೂರಿನ ಮತ್ತಿಕೆರೆಯ ಭರತ್ ಭೂಷಣ್ ಅವರ ಪತ್ನಿ ಸುಜಾತ ಅವರೊಂದಿಗೆ ಇಂದು ದೂರವಾಣಿ ಮೂಲಕ ಮಾತನಾಡಿ, ಧೈರ್ಯ ತುಂಬಿದ್ದಾರೆ. ಇದೇ ವೇಳೆ, ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕಾಶ್ಮೀರ ಪ್ರವಾಸಕ್ಕೆ ತೆರಳಿರುವ ೪೦ಕ್ಕೂ ಅಧಿಕ ಕನ್ನಡಿಗರು ಭಯೋತ್ಪಾದಕ ದಾಳಿಯಿಂದ ಸಂಕಷ್ಟಕ್ಕೆ ಸಿಲುಕಿದ್ದು, ಅವರನ್ನು ಸುರಕ್ಷಿತವಾಗಿ ತಾಯ್ನಾಡಿಗೆ ಕರೆತರಲು ವಿಶೇಷ ವಿಮಾನ ವ್ಯವಸ್ಥೆ ಮಾಡಲಾಗಿದೆ. ಪ್ರತಿಯೊಬ್ಬ ಕನ್ನಡಿಗನನ್ನು ಸುರಕ್ಷಿತವಾಗಿ ರಾಜ್ಯಕ್ಕೆ ಕರೆತರಲು ಸರ್ಕಾರ ಬದ್ಧವಾಗಿದ್ದು, ಯಾರೊಬ್ಬರು ಆತಂಕಪಡುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

*****************

ಪಹಲ್ಗಾಮ್ ಭಯೋತ್ಪಾದಕರ ದಾಳಿ ಪೂರ್ವಯೋಜಿತ ಸಂಚಾಗಿದ್ದು, ಈ ಘಟನೆ ಅತ್ಯಂತ ಖಂಡನೀಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಸರ್ಕಾರದಿಂದ ಸಕಲ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದ್ದಾರೆ. ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಭಯೋತ್ಪಾದಕರ ದಾಳಿಯನ್ನು ಕೇಂದ್ರ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ.

*****************

ಪಹಲ್ಗಾಮ್‌ನಲ್ಲಿ ಕನ್ನಡಿಗರ ಮೇಲೆ ಭಯೋತ್ಪಾದಕರ ದಾಳಿ ನಡೆದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಪರಿಸ್ಥಿತಿ ಅವಲೋಕಿಸಲು ಸಚಿವ ಸಂತೋಷ್ ಲಾಡ್ ಅವರನ್ನು ಜಮ್ಮು-ಕಾಶ್ಮೀರಕ್ಕೆ ಕಳುಹಿಸಿಕೊಟ್ಟಿದ್ದಾರೆ. ಇಂದು ಬೆಳಗಿನ ಜಾವ ಶ್ರೀನಗರ ವಿಮಾನ ನಿಲ್ದಾಣಕ್ಕೆ ಬಂದಿಳಿದ ಸಂತೋಷ್ ಲಾಡ್, ಕೂಡಲೇ ಪಹಲ್ಗಾಮ್‌ಗೆ ತೆರಳಿ, ಅಗತ್ಯ ಕ್ರಮಗಳನ್ನು ಕೈಗೊಂಡಿದ್ದಾರೆ. ಮೃತ ಕುಟುಂಬಸ್ಥರಿಗೆ ಹಾಗೂ ಪ್ರವಾಸಿಗರಿಗೆ ಧೈರ್ಯ ತುಂಬಿದ್ದಾರೆ. ಸಾವನ್ನಪ್ಪಿದವರ ಪಾರ್ಥಿವ ಶರೀರಗಳನ್ನು ಇಂದು ಸಂಜೆ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ತರಲಾಗುತ್ತದೆ. ಬಳಿಕ ಅವರವರ ಊರುಗಳಿಗೆ

ಕಳುಹಿಸಿಕೊಡಲಾಗುವುದು. ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಅವರೂ ಶ್ರೀನಗರದಲ್ಲಿ ಸಂತ್ರಸ್ತರನ್ನು ಭೇಟಿ ಮಾಡಿದರು. ಮೃತಪಟ್ಟ ಶಿವಮೊಗ್ಗದ ಮಂಜುನಾಥ್ ಅವರ ಪತ್ನಿ ಹಾಗೂ ಪುತ್ರನಿಗೆ ಧೈರ್ಯ ತುಂಬಿದರು.
ಈ ನಡುವೆ ಕರ್ನಾಟಕದ ಪ್ರವಾಸಿ ಕಾರ್ಯಾಚರಣೆದಾರರು ತಮ್ಮ ಮೂಲಕ ಜಮ್ಮು-ಕಾಶ್ಮೀರಕ್ಕೆ ಪ್ರವಾಸಕ್ಕೆ ತೆರಳಿರುವ ಪ್ರಯಾಣಿಕರ ವಿವರಗಳನ್ನು ಈ ಕೆಳಕಂಡ ಸಹಾಯವಾಣಿಗೆ ನೀಡಬೇಕೆಂದು ಪ್ರವಾಸೋದ್ಯಮ ಇಲಾಖೆ ನಿರ್ದೇಶಕರು ಪ್ರಕಟಣೆ ಮೂಲಕ ಕೋರಿದ್ದಾರೆ.

ಜಮ್ಮು-ಕಾಶ್ಮೀರ ಪ್ರವಾಸಕ್ಕೆ ತೆರಳಿರುವ ಪ್ರವಾಸಿಗರ ಸಂಬಂಧಿಕರು ಅಥವಾ ಪರಿಚಯಸ್ಥರು ಪ್ರವಾಸಕ್ಕೆ ತೆರಳಿರುವವರ ವಿವರಗಳನ್ನು ಈ ಕೆಳಕಂಡ ಸಹಾಯವಾಣಿಗೆ ನೀಡಬೇಕೆಂದು ಕೋರಲಾಗಿದೆ. ಸಹಾಯವಾಣಿ ಸಂಖ್ಯೆ ೦೮೦-೪೩೩ ೪೪೩೩೪, ೦೮೦-೪೩೩ ೪೪೩೩೫, ೦೮೦- ೪೩೩ ೪೪೩೩೬, ೦೮೦- ೪೩೩ ೪೪೩೪೨ ಮೂಲಕ ಮಾಹಿತಿ ನೀಡಬಹುದಾಗಿದೆ.

*****************

ಕಾಶ್ಮೀರ ಪ್ರವಾಸ ಕೈಗೊಂಡಿರುವ ಚಿಕ್ಕಮಗಳೂರಿನ ರಾಮೇಶ್ವರ ನಗರ ಬಡಾವಣೆಯ ಒಂದೇ ಕುಟುಂಬದ ಐವರು ಸುರಕ್ಷಿತವಾಗಿದ್ದಾರೆ ಎಂದು ಜಿಲ್ಲಾಡಳಿತ ತಿಳಿಸಿದೆ. ಚಂದ್ರಶೇಖರ್ ಎಂಬುವವರ ಕುಟುಂಬ ತಮ್ಮ ಪತ್ನಿ ಇಬ್ಬರು ಮಕ್ಕಳು ಹಾಗು ತಾಯಿಯೊಂದಿಗೆ ಕಾಶ್ಮೀರ ಪ್ರವಾಸಕೆ ತೆರಳಿದ್ದು ಪೆಹಲ್ಗಾಂನಲ್ಲಿ ಉಳಿದುಕೊಂಡಿದ್ದರು. ದಾಳಿ ನಡೆದ ಸ್ಥಳದ ಕೊಂಚ ದೂರದಲ್ಲಿ ಈ ಕುಟುಂಬ ವಾಸ್ತವ್ಯಹೂಡಿತ್ತು. ಸಚಿವ ಸಂತೋಷ್ ಲಾಡ್ ಕಾಶ್ಮೀರದಲ್ಲಿ ಚಂದ್ರಶೇಖರ್ ಅವರನ್ನು ಸಂಪರ್ಕಿಸಿದ್ದು, ಪ್ರವಾಸಿಗರನ್ನು ಸುರಕ್ಷಿತವಾಗಿ ಕರೆತರುವ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

*****************

ಶ್ರೀನಗರ ಪ್ರವಾಸ ಕೈಗೊಂಡಿರುವ ಕೊಪ್ಪಳ ನಗರದಲ್ಲಿನ ನಾಲ್ಕು ಕುಟುಂಬಗಳ ಸದಸ್ಯರು ಜಮ್ಮು ಕಾಶ್ಮೀರದಲ್ಲಿ ಸುರಕ್ಷಿತವಾಗಿದ್ದಾರೆ. ಕೊಪ್ಪಳದ ಸಿದ್ದು ಗಣವಾರಿ, ಉದ್ಯಮಿ ಶರಣಪ್ಪ ಸಜ್ಜನ, ಕಾಂಗ್ರೆಸ್ ಮುಖಂಡ ಕಾಟನ್ ಪಾಷಾ ಮತ್ತು ಶಿವಕುಮಾರ ಪಾವಲಿ ಶೆಟ್ಟರ್, ಕುಟುಂಬ ಸದಸ್ಯರ ಜೊತೆ ಮಂಗಳವಾರ ಶ್ರೀನಗರಕ್ಕೆ ತೆರಳಿದ್ದರು. ಇದೀಗ ಪ್ರವಾಸ ರದ್ದುಗೊಳಿಸಿ ಇಂದು ಹಿಂತಿರುಗಲು ನಿರ್ಧರಿಸಲಾಗಿದೆ ಎಂದು ಕಾಶ್ಮೀರದಲ್ಲಿರುವ ಕೊಪ್ಪಳದ ಎಂ.ಕಾಟನ್ ಪಾಷಾ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

*****************

ಜಮ್ಮು-ಕಾಶ್ಮೀರದಲ್ಲಿ ಭಯೋತ್ಪಾದಕ ದಾಳಿಗೆ ಪ್ರತಿಯಾಗಿ ಕೇಂದ್ರ ಸರ್ಕಾರ ತಕ್ಕ ಪ್ರತ್ಯುತ್ತರ ನೀಡಲಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲೂ ಸರ್ಕಾರ ಸ್ಲೀಪರ್ ಸೆಲ್‌ಗಳನ್ನು ಪತ್ತೆ ಹಚ್ಚಿ ಕಾನೂನು ಸುವ್ಯವಸ್ಥೆ ಕಾಪಾಡಬೇಕು ಎಂದು ಒತ್ತಾಯಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಜಮ್ಮು-ಕಾಶ್ಮೀರದ ವಿಶೇಷ ಸ್ಥಾನಮಾನ ರದ್ದು ಮಾಡಿ, ಅಭಿವೃದ್ಧಿಗೆ ದಾರಿ ಮಾಡಿದ್ದರು. ಈಗ ಭಯೋತ್ಪಾದಕ ಸಂಘಟನೆಗಳು ಈ ಕೆಲಸ ಮಾಡಿರುವುದು ಖಂಡನೀಯ ಎಂದು ತಿಳಿಸಿದ್ದಾರೆ.

*****************

ಇತಿಹಾಸ ಮತ್ತು ಪರಂಪರೆಯನ್ನು ತಿಳಿಸುವ ಪ್ರಾಚ್ಯವಸ್ತುಗಳನ್ನು ಗೌರವಿಸುವುದರ ಜೊತೆಗೆ ಅವುಗಳನ್ನು ಸಂರಕ್ಷಿಸಬೇಕಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ಆನೆಗೊಂದಿಯಲ್ಲಿರುವ ಕೃಷ್ಣದೇವರಾಯ ಸಮಾಧಿ ಸ್ಥಳಕ್ಕೆ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೃಷ್ಣದೇವರಾಯ ಸಮಾಧಿ ೬೪ ಕಂಬಗಳಿಂದ ಕೂಡಿದ ಐತಿಹಾಸಿಕ ಸ್ಥಳವಾಗಿದೆ.

ಇಲ್ಲಿ ಮಾಂಸ ಮಾರಾಟ ನಡೆದಿರುವುದು ನೋವಿನ ಸಂಗತಿಯಾಗಿದೆ ಎಂದು ಹೇಳಿದ್ದಾರೆ. ಈಗಾಗಲೇ ಮೂವರ ಮೇಲೆ ಪ್ರಕರಣ ದಾಖಲಿಸಲಾಗಿದ್ದು, ಕಠಿಣ ಕ್ರಮದ ಎಚ್ಚರಿಕೆ ನೀಡಿದ್ದಾರೆ.

****************

ಪ್ರಸ್ತುತ ದೇಶದಲ್ಲಿ ಹೆಚ್ಚುತ್ತಿರುವ ಆನ್‌ಲೈನ್ ಹಣಕಾಸು ವಂಚನೆಗಳನ್ನು ತಡೆಯಲು ರಾಜ್ಯದಲ್ಲಿ ಸೈಬರ್ ಅಪರಾಧ ಸಹಾಯವಾಣಿ-೧೯೩೦ ಜೊತೆಗೆ ವೆಬ್ ಬಾಟ್ ಉನ್ನತೀಕರಣ ಮಾಡಲಾಗಿದೆ ಎಂದು ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಮಾತನಾಡಿದ ಅವರು, ಸಾರ್ವಜನಿಕರು ಪ್ರತಿನಿತ್ಯ ಆನ್‌ಲೈನ್ ಹಣಕಾಸು ವಂಚನೆಗಳಿಗೆ ಒಳಗಾಗುತ್ತಿರುವ ಪ್ರಕರಣಗಳು ಹೆಚ್ಚುತ್ತಿದೆ. ಈ ಹಿನ್ನಲೆಯಲ್ಲಿ ತಕ್ಷಣ ಸಾರ್ವಜನಿಕರು ದೂರು ದಾಖಲಿಸಲು ಅನುಕೂಲವಾಗುವಂತೆ ಸೈಬರ್ ಅಪರಾಧ ಸಹಾಯವಾಣಿ-೧೯೩೦ ಹಾಗೂ ವೆಬ್ ಬಾಟ್ ಉನ್ನತೀಕರಿಸಲಾಗಿದೆ ಎಂದು ಹೇಳಿದ್ದಾರೆ.

****************

ಕೇಂದ್ರ ಲೋಕ ಸೇವಾ ಅಯೋಗವು ೨೦೨೪ರಲ್ಲಿ ನಡೆಸಿದ ಕೇಂದ್ರ ನಾಗರಿಕ ಸೇವಾ ಪರೀಕ್ಷೆ ಫಲಿತಾಂಶ ಪ್ರಕಟಗೊಂಡಿದ್ದು ಕೋಲಾರ ಜಿಲ್ಲೆಯಿಂದ ಇಬ್ಬರು ಉತ್ತಮ ಶ್ರೇಣಿ ಪಡೆದುಕೊಂಡು ಆಯ್ಕೆಯಾಗಿದ್ದಾರೆ. ಕೋಲಾರ ತಾಲೂಕಿನ ಇರಗಸಂದ್ರ ಎ.ಮಧು ೫೪೪ನೇ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ. ಶ್ರೀನಿವಾಸಪುರ ಪಟ್ಟಣದ ಡಾ.ಮಾಧವಿ ೪೪೬ನೇ ಶ್ರೇಣಿಯಲ್ಲಿ ತೇರ್ಗಡೆ ಹೊಂದಿ, ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಡಾ.ಮಾಧವಿ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

****************

ಇಂದಿನಿಂದ ೪ ದಿನಗಳ ಕಾಲ ದಾವಣಗೆರೆ ಜಿಲ್ಲಾ ಪ್ರವಾಸದಲ್ಲಿರುವ ಉಪ ಲೋಕಾಯುಕ್ತ ಬಿ.ವೀರಪ್ಪ ಅವರು ಇಂದು ನಗರದ ವಿವಿಧ ಸ್ಥಳಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕೃಷಿ ಉತ್ಪನ್ನ ಮಾರುಕಟ್ಟೆ, ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ನಿಲ್ದಾಣ, ಮಹಿಳಾ ನಿಲಯ, ಸೇರಿದಂತೆ ಹಲವು ಕಡೆಗಳಲ್ಲಿ ಭೇಟಿ ನೀಡಿ ಅವ್ಯವಸ್ಥೆ ಕಂಡು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಡಾ.ಬಾಬೂ ಜಗಜೀವನರಾಂ ಸಮುದಾಯ ಭವನಕ್ಕೆ ಭೇಟಿ ನೀಡಿ ಸಂಬಂಧಿಸಿದ ಅಧಿಕಾರಿಯ ವಿರುದ್ಧ ದೂರು ದಾಖಲಿಸಲು ಸೂಚಿಸಿದ್ದಾರೆ.

*********ಮುಕ್ತಾಯ********